ಸೂಳ್ಯ ವಿಧಾನ ಸಭಾ ಕ್ಷೇತ್ರದಲ್ಲಿ ಸ್ವಸಹಾಯ ಗುಂಪುಗಳು.

2012(2779)

ಶ್ರೀ ಅಂಗಾರ ಎಸ್ (ಸುಳ್ಯ): ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸುಳ್ಯ ವಿಧಾನ ಸಭಾ ಕ್ಷೇತ್ರದಲ್ಲಿ ಎಷ್ಟು ಸ್ವಸಹಾಯ ಗುಂಪುಗಳನ್ನು ರಚಿಸಲಾಗಿದೆ? ರಚಿಸಲಾದ ಗುಂಪುಗಳಿಂದ ಎಷ್ಟು ಹಣವನ್ನು ಸಂಗ್ರಹಿಸಿ ಡಿಪಾಸಿಟ್ ಮಾಡಲಾಗಿದೆ? (ವಿವರ ನೀಡುವುದು)

ಆ) ರಚಿಸಲಾದ ಗುಂಪುಗಳು ಯಾವ ಯಾವ ಸಂಸ್ಥೆಗೆ ಡಿಪಾಸಿಟ್ ಮಾಡಿದೆ? ಯಾವ ಉದ್ದೇಶಗಳಿಗೆ ಸಾಲ ಸೌಲಭ್ಯ ನೀಡಲಾಗಿದೆ? (ವಿವರ ನೀಡುವುದು)

ಶ್ರೀಮತಿ ಮೋಟಮ್ಮ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು):

ಅ) ಸುಳ್ಯ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 430 ಸ್ವಸಹಾಯ ಗುಂಪುಗಳನ್ನು ರಚಿಸಲಾಗಿದೆ. ಆ ಪೈಕಿ ಸ್ತ್ರೀಶಕ್ತಿ ಯೋಜನೆಯಡಿ 193 ಗುಂಪುಗಳನ್ನು ರಚಿಸಲಾಗಿದೆ. ಸ್ತ್ರೀಶಕ್ತಿ ಗುಂಪುಗಳಿಂದ ಸಂಗ್ರಹಿಸಿದ ಉಳಿತಾಯದ ಮೊತ್ತ 2,79,550 ರೂ.ಗಳನ್ನು ವಿವಿಧ ಬ್ಯಾಂಕುಗಳಲ್ಲಿ ಜಮಾ ಮಾಡಲಾಗಿದೆ.

ಆ) ರಚಿಸಲಾದ ಗುಂಪುಗಳು ವಿವಿಧ ಬ್ಯಾಂಕುಗಳಲ್ಲಿ ಖಾತೆಗಳನ್ನು ತೆರೆದಿರುತ್ತವೆ.

ಗುಂಪುಗಳು ಬಲವರ್ಧನೆಯ ಹಂತದಲ್ಲಿವೆ. ಮುಂದೆ ಬ್ಯಾಂಕುಗಳಿಂದ ಸಾಲ ಸೌಲಭ್ಯಗಳನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸ್ವಸಹಾಯ ಗುಂಪುಗಳ ಸಾಲ ಸೌಲಭ್ಯ.

2013(2780)

ಶ್ರೀ ಅಂಗಾರ ಎಸ್.(ಸೂಳ್ಯ): ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸ್ವಸಹಾಯ ಗುಂಪುಗಳನ್ನು ರಚಿಸಲಾಗಿದೆಯೇ? (ವಿವರ ನೀಡುವುದು)